ಪ್ರೌಢಶಾಲೆ ಮತ್ತು ಕಿರಿಯ ಮಹಾವಿದ್ಯಾಲಯ ಮಂಜೂರಾತಿ

284 : (314)

ಡಾ ॥ ಶರಣ ಪ್ರಕಾಶ ರುದ್ರಪ್ಪ ಪಾಟೀಲ್

ಅ) ಸೇಡಂ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಅವಶ್ಯಕವಾಗಿ ಬೇಕಾಗಿರುವ ಸರ್ಕಾರದ ಕಿರಿಯ ಮಹಾವಿದ್ಯಾಲಯ ಹಾಗೂ ಪ್ರೌಢಶಾಲೆಗಳ ಮಂಜೂರಾತಿಗಾಗಿ ಬಂದಿರುವ ಪ್ರಸ್ತಾವನೆಗಳು ಎಷ್ಟು; ಅವುಗಳು ಯಾವುದು; 2013–14ನೇ ಸಾಲಿನಲ್ಲಿ ಎಷ್ಟು ಹೊಸ ಸರ್ಕಾರಿ ಕಿರಿಯ ಮಹಾವಿದ್ಯಾಲಯ ಹಾಗೂ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗುವುದು; (ಮಾಹಿತಿ ನೀಡುವುದು)

ಆ) ಯಾವಾಗ ಮಂಜೂರು ಮಾಡಲಾಗುವುದು; (ಮಾಹಿತಿ ನೀಡುವುದು)

ಶ್ರೀ ವಿಶ್ವೇಶ್ವರಯ್ಯ ಹೆಗಡೆ ಕಾಗೇರಿ
(ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಸೇಡಂ ಮತಕ್ಷೇತ್ರ ವ್ಯಾಪ್ತಿಯ ಕೂಡ್ಲಾ, ಕುರುಕಂಟ್ಲಾ ಮತ್ತು ನಿಡಗುಂದಾ ಗ್ರಾಮಗಳಲ್ಲಿ ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸುವ ಕುರಿತು ಸರ್ಕಾರದ ಗಮನಕ್ಕೆ ಬಂದಿದೆ.

2012–13ನೇ ಸಾಲಿನ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆ, ರಹಮತ್‌ನಗರ ಶಾಲೆಯನ್ನು ಪ್ರೌಢಶಾಲೆಯನ್ನಾಗಿ ಉನ್ನತೀಕರಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಮಂಜೂರಾತಿ ದೊರಕಿರುವುದಿಲ್ಲ.

ಆ) ಸ್ಥಳೀಯ ಅಗತ್ಯತೆಗಳನ್ನು ಪರಿಗಣಿಸಿ, ಅನುದಾನದ ಲಭ್ಯತೆಯನ್ನು ಆಧರಿಸಿ ಅಗತ್ಯವಿರುವ ಸ್ಥಳಗಳಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡಲು ಕ್ರಮವಹಿಸಲಾಗುವುದು.

2013–14ನೇ ಸಾಲಿನ ವಾರ್ಷಿಕ ಯೋಜನೆಯನ್ನು ಮಾರ್ಚ್ 2013ರ ಒಳಗೆ ಜಿಲ್ಲೆಯಿಂದ ಪ್ರಸ್ತಾವನೆ ಪಡೆದು ರಾಜ್ಯದ ಯೋಜನೆಯನ್ನು ಸಿದ್ದಪಡಿಸಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು.